**All India Radio: Bangalore**
**National Bulletin In Kannada**
**30.05.2026  1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**30.05.2026  1.10 p.m.**
**<><><><>**

ಮುಖ್ಯಾಂಶಗಳು

1. ಐದು ದಿನಗಳ ಅಧಿಕೃತ ಭೇಟಿಗಾಗಿ ಭಾರತಕ್ಕೆ ಆಗಮಿಸಿದ ಮ್ಯಾನ್ಮಾರ್ ಅಧ್ಯಕ್ಷ; ಬೋಧ್‌ಗಯಾದ ಮಹಾಬೋಧಿ ದೇಗುಲದಲ್ಲಿ ಪ್ರಾರ್ಥನೆ
2. ಬೆಂಗಳೂರಿನಲ್ಲಿಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ; ಮುಂದಿನ ಮುಖ್ಯಮಂತ್ರಿ ಆಯ್ಕೆ ನಿರೀಕ್ಷೆ
3. ಅಗತ್ಯವಿದ್ದರೆ ಆಪರೇಷನ್ ಸಿಂದೂರ ೨.೦ ಕ್ಕೆ ಭಾರತೀಯ ಸಶಸ್ತ್ರ ಪಡೆಗಳು ಸಿದ್ಧ- ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ
4. ಮನ್ ಕಿ ಬಾತ್‌ನ ೧೩೪ನೇ ಆವೃತ್ತಿಯಲ್ಲಿ ನಾಳೆ ಭಾರತೀಯರನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮನದ ಮಾತು
5. ಮಹಿಳಾ ಟಿ-೨೦ ಕ್ರಿಕೆಟ್; ಎರಡನೇ ಪಂದ್ಯದಲ್ಲಿಂದು ಭಾರತ - ಇಂಗ್ಲೆಂಡ್ ಮುಖಾಮುಖಿ

<><><><>

ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಔಂಗ್ ಹ್ಲೈಂಗ್ ಐದು ದಿನಗಳ ಭಾರತ ಭೇಟಿಗಾಗಿ ಇಂದು ಬಿಹಾರದ ಬೋಧ್‌ಗಯಾಗೆ ಆಗಮಿಸಿದ್ದಾರೆ. ಅವರೊಂದಿಗೆ ಹಲವು ಸಂಪುಟ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ಉದ್ಯಮಿಗಳನ್ನೊಳಗೊಂಡ ಉನ್ನತ ಮಟ್ಟದ ನಿಯೋಗ ಭಾರತಕ್ಕೆ ಆಗಮಿಸಿದೆ. ಅವರು ವಿಶ್ವ ಪ್ರಸಿದ್ಧ ಮಹಾಬೋಧಿ ದೇಗುಲ ಮತ್ತು ಬಕ್ರೌರ್‌ನಲ್ಲಿರುವ ಐತಿಹಾಸಿಕ ಸುಜಾತಾ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದರು.  ಬಳಿಕ ಮ್ಯಾನ್ಮಾರ್ ಅಧ್ಯಕ್ಷರು ಇಂದು ಸಂಜೆ ನವದೆಹಲಿಗೆ ತೆರಳಿ, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿಯಾಗಲಿದ್ದಾರೆ. ನಾಳೆ ಅವರು, ಭಾರತ - ಮ್ಯಾನ್ಮಾರ್ ವ್ಯಾಪಾರ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಸೋಮವಾರ ಮ್ಯಾನ್ಮಾರ್ ಅಧ್ಯಕ್ಷರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಉಭಯ ದೇಶಗಳ ನಡುವಿನ ಐತಿಹಾಸಿಕ ಮತ್ತು ನಾಗರಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ

ಕುರಿತು ಚರ್ಚೆ ನಡೆಸಲಿದ್ದಾರೆ. ಜೂನ್ ೨ ರಂದು ಮ್ಯಾನ್ಮಾರ್ ಅಧ್ಯಕ್ಷರು ಮುಂಬೈಗೆ ಭೇಟಿ ನೀಡಲಿದ್ದು, ಈ ವೇಳೆ ಕೈಗಾರಿಕೋದ್ಯಮಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಮ್ಯಾನ್ಮಾರ್ ಅಧ್ಯಕ್ಷರ ಭೇಟಿಯು ಉಭಯ ದೇಶಗಳ ನಡುವಿನ ಬಹು ಕಾಲದ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆ ಇದೆ.

<><><>

ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಇಂದು ಸಂಜೆ ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಲಿದ್ದಾರೆ. ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ವಿಧಾನಪರಿಷತ್ತಿನಲ್ಲಿ ಸಭಾ ನಾಯಕ ಎನ್.ಎಸ್.ಬೋಸರಾಜು ಸೇರಿದಂತೆ ಕಾಂಗ್ರೆಸ್‌ನ ಎಲ್ಲಾ ಶಾಸಕರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ. ಈ ಸಭೆಯಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ನಡೆಯಲಿದ್ದು, ಅವರು ರಾಜ್ಯಪಾಲರನ್ನು ಭೇಟಿ ಮಾಡಿ ಸರ್ಕಾರದ ರಚನೆಗೆ ಹಕ್ಕು ಮಂಡಿಸಲಿದ್ದಾರೆ. ಇಂದು ಬೆಳಗ್ಗೆ ಕಾಂಗ್ರೆಸ್ ನಾಯಕ ಡಿ.ಕೆ. ಶಿವಕುಮಾರ್ ಅವರು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಭೇಟಿಯಾದರು.

<><><>

ಭಾರತೀಯ ಸಶಸ್ತ್ರ ಪಡೆಗಳು ಇಂದು ಹೆಚ್ಚಿನ ಸನ್ನದತೆಯಲ್ಲಿವೆ. ಮತ್ತಷ್ಟು ಮಿಲಿಟರಿ ಕ್ರಮ ಅಗತ್ಯವಿದ್ದರೆ ಆಪರೇಷನ್ ಸಿಂದೂರ ೨.೦ ಕ್ಕೆ ಸಿದ್ಧವಾಗಿವೆ ಎಂದು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ತಿಳಿಸಿದ್ದಾರೆ. ಪುಣೆಯ ಖಡಕ್ವಾಸ್ಲಾದಲ್ಲಿರುವ ರಾಷ್ಟ್ರೀಯ ರಕ್ಷಣಾ ಅಕಾಡೆಮಿಯಲ್ಲಿ ನೂತನ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಆಪರೇಷನ್ ಸಿಂದೂರ-ಅಡಿಯಲ್ಲಿ ನಿಖರತೆ ಮತ್ತು ದೃಢನಿಶ್ಚಯದಿಂದ ಪ್ರತಿಕ್ರಿಯಿಸುವ ಸಾಮರ್ಥ್ಯವನ್ನು ಭಾರತ ಪ್ರದರ್ಶಿಸಿದೆ. ಇದು ಉದಯೋನ್ಮುಖ ಭದ್ರತಾ ಸವಾಲುಗಳಿಗೆ ದೇಶದ ಪ್ರತಿಕ್ರಿಯೆಗೆ ಮಾನದಂಡವನ್ನು ನಿಗದಿಪಡಿಸಿತು ಎಂದರು. ಆಪರೇಷನ್ ಸಿಂದೂರ-ರಾಷ್ಟ್ರದ ಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ. ಸೈನಿಕರ ನಂಬಿಕೆ ಮತ್ತು ವಿಶ್ವಾಸದ ಮೇಲೆ ಪರಿಣಾಮಕಾರಿ ನಾಯಕತ್ವವನ್ನು ನಿರ್ಮಿಸಲಾಗಿದೆ ಎಂದು ಜನರಲ್ ಉಪೇಂದ್ರ ದ್ವಿವೇದಿ ಹೇಳಿದರು.

<><><>

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು, ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ - ೬ ಅನ್ನು ಬಿಡುಗಡೆ ಮಾಡಿದೆ. ಇದರಲ್ಲಿ ಭಾರತದ ತಾಯಂದಿರು ಮತ್ತು ಮಕ್ಕಳ ಆರೋಗ್ಯ, ಪೋಷಣೆ ಮತ್ತು ಆರ್ಥಿಕ ರಕ್ಷಣೆಯಲ್ಲಿ ವೇಗವರ್ಧಿತ ಪ್ರಗತಿಯನ್ನು ಬಿಂಬಿಸುವ ದತ್ತಾಂಶವಿದೆ. ೨೦೨೩-೨೪ರ ಅವಧಿಯಲ್ಲಿ ಈ ಸಮೀಕ್ಷೆಯನ್ನು ನಡೆಸಿದ್ದು, ಇದು ೭೧೫ ಜಿಲ್ಲೆಗಳಲ್ಲಿ ೬.೭೯ ಲಕ್ಷ ಮನೆಗಳನ್ನು ಒಳಗೊಂಡಿದೆ.  ಸಮೀಕ್ಷೆಯ ಪ್ರಕಾರ, ಆಸ್ಪತ್ರೆಗಳಲ್ಲಿ ಹೆರಿಗೆಗಳು ಶೇಕಡ ೮೮.೬ರಿಂದ ಶೇಕಡ ೯೦.೬ಕ್ಕೆ ಏರಿಕೆಯಾಗಿದೆ. ಗರ್ಭಿಣಿಯರಲ್ಲಿ ಶೇಕಡ ೯೫.೯ರಷ್ಟು ಜನರು ಪ್ರಸವ ಪೂರ್ವ ಆರೈಕೆಯನ್ನು ಪಡೆದಿದ್ದಾರೆ. ಮೊದಲ ತ್ರೈಮಾಸಿಕದಲ್ಲಿ ಪ್ರಸವ ಪೂರ್ವ ಆರೈಕೆಯನ್ನು ಪಡೆಯುವ ತಾಯಂದಿರ ಪ್ರಮಾಣವು, ಶೇಕಡ ೭೦ ರಿಂದ ೭೬.೨ಕ್ಕೆ ಏರಿಕೆಯಾಗಿದೆ.  ದೇಶದ ಒಟ್ಟು ಫಲವತ್ತತೆ ದರ - ಟಿಎಫ್‌ಆರ್ ೨ರಲ್ಲಿಯೇ ಉಳಿದಿದೆ. ಲಸಿಕೆ ಪಡೆದ ೧೨ ರಿಂದ ೨೩ ತಿಂಗಳ ಮಕ್ಕಳ ಪ್ರಮಾಣ ಶೇಕಡ ೯೬ಕ್ಕಿಂತ ಹೆಚ್ಚಿದೆ. ಈ ಸುಧಾರಣೆಗಳು ಮಿಷನ್ ಪರಿವಾರ್ ವಿಕಾಸ್ ಸೇರಿದಂತೆ ರಾಷ್ಟ್ರೀಯ ಕುಟುಂಬ ಯೋಜನಾ ಕಾರ್ಯಕ್ರಮಗಳ ನಿರಂತರ ಪರಿಣಾಮವನ್ನು ಪ್ರತಿಬಿಂಬಿಸುತ್ತವೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ. ಮಹಿಳೆಯರ ಡಿಜಿಟಲ್ ಸೇರ್ಪಡೆ ಮತ್ತು ಆರ್ಥಿಕ ಸಬಲೀಕರಣದಲ್ಲಿ ನಿರಂತರ ಪ್ರಗತಿಯನ್ನು ಸಮೀಕ್ಷೆ ದಾಖಲಿಸಿದೆ. ಇಂಟರ್‌ನೆಟ್ ಬಳಸುವ ಮಹಿಳೆಯರ ಪ್ರಮಾಣ ಶೇಕಡ ೩೩.೩ರಿಂದ ಶೇಕಡ ೬೪.೩ಕ್ಕೆ ದ್ವಿಗುಣಗೊಂಡಿದೆ. ಆಯುಷ್ಮಾನ್ ಭಾರತ್ ಮತ್ತು ವಿಸ್ತೃತ ಆರೋಗ್ಯ ರಕ್ಷಣಾ ಉಪಕ್ರಮಗಳು, ಆರೋಗ್ಯ ರಕ್ಷಣೆಯಲ್ಲಿ ಆರ್ಥಿಕ ಭದ್ರತೆಯನ್ನು ಬಲಪಡಿಸಿವೆ. ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವತ್ತ ಭಾರತದ ಸ್ಥಿರ ಪ್ರಗತಿಯನ್ನು ಈ ಸಂಶೋಧನೆಗಳು ಪುನರುಚ್ಚರಿಸುತ್ತವೆ ಎಂದು ಸಚಿವಾಲಯ ಹೇಳಿದೆ.

<><><><>

ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದಾಗಿ ಜಾಗತಿಕ ಇಂಧನ ಪೂರೈಕೆಯಲ್ಲಿ ಪರಿಣಾಮ ಬೀರುತ್ತಿರುವ ಕಾರಣ ಕನಿಷ್ಠ ೩೦ ದಿನಗಳವರೆಗೆ ಸಾಕಾಗುವಷ್ಟು ಎಲ್‌ಪಿಜಿ ದಾಸ್ತಾನು ಶೇಖರಿಸುವಂತೆ ಕೇಂದ್ರ ಸರ್ಕಾರ, ಸಾರ್ವಜನಿಕ ವಲಯದ ತೈಲ ಮಾರುಕಟ್ಟೆ ಕಂಪನಿಗಳಿಗೆ ಸೂಚಿಸಿದೆ. ಈ ಕುರಿತು ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ಭಾರತ ತನ್ನ ಕಚ್ಚಾತೈಲ ಸಂಗ್ರಹ

ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸಹ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು. ಇದೇ ವೇಳೆ ಸರ್ಕಾರಿ ಸ್ವಾಮ್ಯದ ತೈಲ ಮಾರುಕಟ್ಟೆ ಕಂಪನಿಗಳಾದ ಇಂಡಿಯನ್ ಆಯಿಲ್ ಕಾರ್ಪೊರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ತಮ್ಮ ನಿಯಮಿತ ವಾಣಿಜ್ಯ ದಾಸ್ತಾನುಗಳ ಜೊತೆಗೆ ಹೆಚ್ಚುವರಿ ಸಂಗ್ರಹಣೆಗಾಗಿ ಯೋಜನೆಗಳನ್ನು ಸಿದ್ಧಪಡಿಸುವಂತೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು. ದೇಶದಲ್ಲಿ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ, ಕಚ್ಚಾತೈಲ ಮತ್ತು ನೈಸರ್ಗಿಕ ಅನಿಲದ ದಾಸ್ತಾನು ಸಾಕಷ್ಟಿದೆ. ಸಂಸ್ಕರಣಾಗಾರಗಳು ಅತ್ಯುತ್ತಮ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಎಲ್‌ಪಿಜಿ ಉತ್ಪಾದನೆಯು ದಿನಕ್ಕೆ ಸುಮಾರು ೯೨ ಸಾವಿರ ಮೆಟ್ರಿಕ್ ಟನ್‌ಗಳ ಸಾರ್ವಕಾಲಿಕ ಗರಿಷ್ಠ ಮಟ್ಟವನ್ನು ತಲುಪಿದೆ. ಕಳೆದ ನಾಲ್ಕು ದಿನಗಳಲ್ಲಿ ಸುಮಾರು ೧.೮ ಕೋಟಿ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ ಎಂದು ಸುಜಾತಾ ಶರ್ಮಾ ತಿಳಿಸಿದರು.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ  ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೪ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><><>

ಬ್ರಿಸ್ಟಲ್‌ನಲ್ಲಿಂದು ಎರಡನೇ ಅಂತಾರಾಷ್ಟ್ರೀಯ ಮಹಿಳಾ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಲಿದ್ದು, ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಭಾರತ ಪ್ರಸ್ತುತ ಸರಣಿಯಲ್ಲಿ ೧-೦ ಅಂತರದ ಮುನ್ನಡೆಯಲ್ಲಿದೆ.

<><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟನ್ಸ್ ಮುಖಾಮುಖಿಯಾಗಲಿವೆ. ಪಂದ್ಯ ನಾಳೆ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಚಂಡೀಗಢದ ಮಹಾರಾಜ ಯದುವೇಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್‌ನ ಎರಡನೇ ಅರ್ಹತಾ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ವಿರುದ್ಧ ಗುಜರಾತ್ ಟೈಟನ್ಸ್ ಏಳು ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>